# ಭೂ ಸುಧಾರಣಾ ಕಾಯಿದೆ ತಿದ್ದುಪಡಿ ಪ್ರಶ್ನಿಸಿ ಮತ್ತೊಂದು ಪಿಐಎಲ್

■ **ವಿಕ ಸುದ್ದಿಲೋಕ** ಬೆಂಗಳೂರು

ಭೂಸುಧಾರಣೆ ಕಾಯಿದೆಗೆ ಕೆಲ ತಿದ್ದುಪಡಿಗಳನ್ನು ತಂದು ಸರಕಾರ ಇತ್ತೀಚೆಗೆ ಜಾರಿಗೊಳಿಸಿರುವ 'ಕರ್ನಾಟಕ ಭೂಸುಧಾರಣೆಗಳ (ತಿದ್ದುಪಡಿ) ಕಾಯ್ದೆ -2020' ಗೆಜೆಟ್ ನೋಟಿಫಿಕೇಷನ್ ರದ್ದು ಕೋರಿ ಹೈಕೋರ್ಟ್‌ನಲ್ಲಿ ಮತ್ತೊಂದು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.



ಬೆಂಗಳೂರಿನ ವಕೀಲೆ ಗೀತಾ ಮಿಶ್ರಾ ಸಲ್ಲಿಸಿರುವ ಪಿಐಎಲ್ ಮಂಗಳವಾರ ಸಿಜೆ. ಎ.ಎಸ್.ಓಕ್ ನೇತೃತ್ವದ ವಿಭಾಗೀಯ ಪೀಠದ ಮುಂದೆ ವಿಚಾರಣೆಗೆ ಬಂದಿತು.

ಅರ್ಜಿ ಪರಿಶೀಲಿಸಿದ ಪೀಠ, ಅದೇ ವಿಚಾರ ಸಂಬಂಧ ಮತ್ತೊಂದು ಪಿಐಎಲ್ ಸಲ್ಲಿಕೆಯಾಗಿದ್ದು, ಎರಡೂ ಅರ್ಜಿಗಳನ್ನು ಒಟ್ಟಿಗೆ ವಿಚಾರಣೆ ನಡೆಸುವುದಾಗಿ ಹೇಳಿತು. ಅರ್ಜಿ ಸಂಬಂಧ ರಾಜ್ಯ ಸರಕಾರಕ್ಕೆ ನೋಟಿಸ್ ಜಾರಿಗೊಳಿಸಿದ ಪೀಠ, ಸೆ.20ರೊಳಗೆ ಆಕ್ಷೇಪಣೆ ಸಲ್ಲಿಸುವಂತೆ ಸರಕಾರಕ್ಕೆ ಸೂಚನೆ ನೀಡಿ ವಿಚಾರಣೆ ಮುಂದೂಡಿತು.

ಅರ್ಜಿದಾರರ ಪರ ವಕೀಲ ಜಿ.ಆರ್. ಮೋಹನ್, ತಿದ್ದುಪಡಿಯು ಭೂ ಮಾಫಿಯಾ ಉತ್ತೇಜಿಸುವಂತಿದ್ದು ಶ್ರೀಮಂತರಿಗೆ ಅನುಕೂಲ ಮಾಡಿ ಕೊಡುವ ಉದ್ದೇಶದಿಂದ ಈ ಸುಗ್ರೀವಾಜ್ಞೆ ಹೊರಡಿಸಲಾಗಿದೆ. ಇದರಿಂದ ಭೂಮಿ ಮಾರಾಟ ಮಾಡಲು ರೈತರ ಮೇಲೆ ಒತ್ತಡ ಹೇರುವ ಸಾಧ್ಯತೆಯಿದೆ. ಕೋವಿಡ್ -19ನಿಂದ ಈಗಾಗಲೇ ಸಂಕಷ್ಟ ಎದುರಿಸುತ್ತಿರುವ ರೈತರು ತಮ್ಮ ಭೂಮಿ ಮಾರಾಟ ಮಾಡಲು ಮುಂದಾಗಬಹುದು, ಇದರಿಂದ ಕೃಷಿ ಭೂಮಿ ಶ್ರೀಮಂತರ ಪಾಲಾಗಲಿದೆ ಎಂದರು.

ರಾಜ್ಯದಲ್ಲಿ ಆಹಾರ ಧಾನ್ಯಗಳ ಕೊರತೆಯುಂಟಾಗುವ ಸಾಧ್ಯತೆಯಿದೆ. ಆದ್ದರಿಂದ, ಸುಗ್ರೀವಾಜ್ಞೆ ರದ್ದುಪಡಿಸಬೇಕು ಎಂದು ಕೋರಿರುವ ಅರ್ಜಿದಾರರು, ಪಿಐಎಲ್ ಇತ್ಯರ್ಥವಾಗುವವರೆಗೆ ಈ ಗೆಜೆಟ್ ನೋಟಿಫಿಕೇಷನ್‌ಗೆ ಜಾರಿಗೆ ತಡೆಯಾಜ್ಞೆ ನೀಡಬೇಕು ಎಂದು ಮಧ್ಯಂತರ ಮನವಿ ಮಾಡಿದ್ದಾರೆ.